ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE : 5/4/21

# ಮೀಸಲು ಮಿತಿ ಹೆಚ್ಚಳಕ್ಕೆ ಸುಪ್ರೀಂಗೆ ಮನವಿ

## ಕುರುಬ ಸಮಾಜ ಎಸ್‌ಟಿಗೆ ಸೇರಿಸಲು ಕುಲಶಾಸ್ತ್ರ ಅಧ್ಯಯನ: ಮುಖ್ಯಮಂತ್ರಿ ಯಡಿಯೂರಪ್ಪ

**ಹರಿಹರ:** ಎಲ್ಲ ಸಮುದಾಯಗಳ ಅಭಿವೃದ್ಧಿಗೆ ರಾಜ್ಯ ಸರ್ಕಾರ ಆದ್ಯತೆ ನೀಡಿದ್ದು ಈ ದಿಸೆಯಲ್ಲಿ ಶೇ.50 ಮೀಸಲಾತಿ ಮಿತಿ ಹೆಚ್ಚಿಸಲು ಸುಪ್ರೀಂಕೋರ್ಟ್‌ಗೆ ಮನವಿ ಮಾಡಲಾಗಿದೆ ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಹೇಳಿದರು.

ನಗರದ ಹೊರವಲಯದ ಬೆಳ್ಳೂಡಿ ಸಮೀಪದ ಕಾಗಿನೆಲೆ ಕನಕ ಗುರುಪೀಠದ ಶಾಖಾ ಮಠದ ಐದನೇ ವಾರ್ಷಿಕೋತ್ಸವ ಸಮಾರಂಭದಲ್ಲಿ ಭಾನುವಾರ ನೂತನ ಕಟ್ಟಡಗಳ ಲೋಕಾರ್ಪಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಹಾಲು ಮತ (ಕುರುಬ) ಸಮಾಜವನ್ನು ಎಸ್‌ಟಿ ಮೀಸಲಾತಿಗೆ ಸೇರ್ಪಡೆಗೊಳಿಸುವ ನಿಟ್ಟಿನಲ್ಲಿ ಕುಲಶಾಸ್ತ್ರ ಅಧ್ಯಯನಕ್ಕೆ ಸರ್ಕಾರ ಉನ್ನತ ಮಟ್ಟದ ಸಮಿತಿ ರಚಿಸಿದೆ. ಸಮಿತಿ ವರದಿ ನಿರೀಕ್ಷಿಸಲಾಗುತ್ತಿದ್ದು, ಶ್ರೀಗಳು, ಸಮಾಜದ ಬೇಡಿಕೆ ಈಡೇರಿಕೆಗೆ ಸರ್ಕಾರ ಪ್ರಾಮಾಣಿಕ ಪ್ರಯತ್ನ ಮಾಡುತ್ತಿದೆ ಎಂದರು.

**ಕನಕ ಪುತ್ಥಳಿ ನಿರ್ಮಾಣಕ್ಕೆ 5 ಕೋಟಿ:** ಕನಕ ಗುರುಪೀಠದ ಹೊಸದುರ್ಗ ಶಾಖಾ ಮಠದಲ್ಲಿ ಸ್ಥಾಪನೆಯಾಗಲಿರುವ ಕನಕದಾಸರ ಏಕಶಿಲಾ ಪುತ್ಥಳಿ ಪ್ರತಿಷ್ಠಾಪನೆಗೆ 5 ಕೋಟಿ ರೂ. ಮಂಜೂರು ಮಾಡಲಾಗಿದೆ. ಅನುದಾನದ ಲಭ್ಯತೆ ಆಧರಿಸಿ ಸಂಗೊಳ್ಳಿ ರಾಯಣ್ಣ ಪ್ರಾಧಿಕಾರಕ್ಕೆ ಹಂತ ಹಂತವಾಗಿ 30 ಕೋಟಿ ರೂ. ಮಂಜೂರು ಮಾಡುವುದಾಗಿ ಭರವಸೆ ನೀಡಿದರು.

ಇದಕ್ಕೂ ಮುನ್ನ ಮಾತನಾಡಿದ ಕಾಗಿನೆಲೆ ಗುರುಪೀಠದ ನಿರಂಜನಾನಂದಪುರಿ ಸ್ವಾಮೀಜಿ, ಸರ್ಕಾರ ಭರವಸೆ ನೀಡಿದಂತೆ ಎಸ್‌ಟಿ ಮೀಸಲಾತಿ ಹೋರಾಟ ಸ್ಥಗಿತಗೊಳಿಸಿ ನಂಬಿಕೆ ಇಟ್ಟು ಕಾಯುತ್ತಿದ್ದೇವೆ. ಕುಲಶಾಸ್ತ್ರ ಅಧ್ಯಯನ ಮಾಡಿಸುತ್ತೀರೋ, ವರದಿಯನ್ನು ನೇರವಾಗಿ ಕಳುಹಿಸುತ್ತೀರೋ ಗೊತ್ತಿಲ್ಲ. ಒಟ್ಟಿನಲ್ಲಿ ನಮ್ಮ ಬೇಡಿಕೆ ಈಡೇರಿಸಬೇಕು ಎಂದು ಆಗ್ರಹಿಸಿದರು.



**ಹರಿಹರ: ಕಾಗಿನೆಲೆ ಕನಕ ಗುರುಪೀಠದ ಶಾಖಾ ಮಠದಲ್ಲಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ನೂತನ ಕಟ್ಟಡಗಳನ್ನು ಲೋಕಾರ್ಪಣೆ ಮಾಡಿದರು.**

ಮುಖ್ಯಮಂತ್ರಿ ಯಡಿಯೂರಪ್ಪ ಅವರು ಕನಕ ಜಯಂತಿಗೆ ರಜೆ ಘೋಷಿಸಿದ್ದಾರೆ. ಕಾಗಿನೆಲೆಗೆ 40 ಕೋಟಿ ರೂ. ಅನುದಾನ ನೀಡಿ ಪ್ರವಾಸಿ ತಾಣವನ್ನಾಗಿಸಿದ್ದಾರೆ. ಎಸ್‌ಟಿ ಮೀಸಲಾತಿ ಹೋರಾಟದ ಬಗ್ಗೆ ಕೇಂದ್ರಕ್ಕೆ ವರದಿ ನೀಡಿರುವ ಅವರು ಸಮಾಜದ ಮೀಸಲಾತಿ ಬೇಡಿಕೆ ಈಡೇರಿಸುವ ನಿರೀಕ್ಷೆಯಿದೆ ಎಂದರು.

ಸಂಗೊಳ್ಳಿ ರಾಯಣ್ಣ ಪ್ರಾಧಿಕಾರಕ್ಕೆ ಸಾಕಷ್ಟು ಅನುದಾನ ಘೋಷಿಸಿದ್ದರೂ ಹಣಕಾಸಿನ ಕೊರತೆಯಿಂದ ಕಾಮಗಾರಿಗಳು ನನೆಗುದಿಗೆ ಬಿದ್ದಿವೆ. ಅಂತಹ ಕಾಮಗಾರಿಗೆ ಮತ್ತೆ ಚಾಲನೆ ನೀಡಬೇಕು. ಬಸವ ಪುತ್ಥಳಿ ಸೇರಿ ಅನೇಕ ಏಕಶಿಲಾ ಪುತ್ಥಳಿಗೆ ಅನುದಾನ ನೀಡಿದಂತೆ ಹೊಸದುರ್ಗ ಶಾಖಾ ಮಠದಲ್ಲಿ ನಿರ್ಮಿಸುತ್ತಿರುವ ಕನಕದಾಸ ಏಕಶಿಲಾ ಪುತ್ಥಳಿ ಪ್ರತಿಷ್ಠಾಪನೆಗೂ ಅಗತ್ಯ ಅನುದಾನ ನೀಡಬೇಕೆಂದು ಮನವಿ ಮಾಡಿದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ ಸಚಿವ ಕೆ.ಎಸ್. ಈಶ್ವರಪ್ಪ ಮಾತನಾಡಿ, ಕನಕದಾಸರ ಪುತ್ಥಳಿ ಸ್ಥಾಪನೆಯಿಂದ ರಾಜ್ಯದ ಪ್ರವಾಸೋದ್ಯಮ ಕ್ಷೇತ್ರ ಅಭಿವೃದ್ಧಿ ಹೊಂದಲಿದೆ ಎಂದರು.

ಸಚಿವರಾದ ಬಸವರಾಜ ಬೊಮ್ಮಾಯಿ, ಆರ್.ಶಂಕರ್, ಬೈರತಿ ಬಸವರಾಜ್, ಸಂಸದ ಜಿ.ಎಂ. ಸಿದ್ದೇಶ್ವರ, ಶಾಸಕರಾದ ಎಸ್.ವಿ. ರಾಮಚಂದ್ರ, ಮಾಡಾಳ ವಿರೂಪಾಕ್ಷಪ್ಪ ಅರುಣಕುಮಾರ್ ಪೂಜಾರ, ಪ್ರೊ.ಲಿಂಗಣ್ಣ, ಎಂ.ಪಿ. ರೇಣುಕಾಚಾರ್ಯ, ಬಳ್ಳಾರಿ ವಿರೂಪಾಕ್ಷಪ್ಪ ಮತ್ತಿತರರು ಇದ್ದರು.

## ಒಂದೇ ವೇದಿಕೆಯಲ್ಲಿದ್ದರೂ ಮುಖ ನೋಡದ ಸಿಎಂ ಬಿಎಸ್‌ವೈ–ಈಶ್ವರಪ್ಪ

**ಹರಿಹರ:** ತಮ್ಮ ಇಲಾಖೆಯಲ್ಲಿ ಸಿಎಂ ಹಸ್ತಕ್ಷೇಪಕ್ಕೆ ಆಕ್ಷೇಪ ವ್ಯಕ್ತಪಡಿಸಿ ರಾಜ್ಯಪಾಲರಿಗೆ ಪತ್ರ ಬರೆದ ಸಚಿವ ಈಶ್ವರಪ್ಪ ಹಾಗೂ ಸಿಎಂ ಯಡಿಯೂರಪ್ಪ ಇಬ್ಬರೂ ಭಾನುವಾರ ಕಾಗಿನೆಲೆ ಗುರುಪೀಠದ ಕಾರ್ಯಕ್ರಮದಲ್ಲಿ ಭಾಗಿಯಾದರೂ ಪರಸ್ಪರ ಮುಖ ನೋಡಿಲ್ಲ.

ಕಾಗಿನೆಲೆ ಗುರುಪೀಠದ ಬೆಳ್ಳೂಡಿ ಶಾಖಾ ಮಠದ ವಾರ್ಷಿಕೋತ್ಸವ ಸಮಾರಂಭದಲ್ಲಿ ಮುಖಾಮುಖಿಯಾಗಿ ಸುಮಾರು 3 ಗಂಟೆ ಕಾಲ ಒಟ್ಟಿಗೇ ಇದ್ದು ವೇದಿಕೆ ಹಂಚಿಕೊಂಡರೂ ಅಪ್ಪಿತಪ್ಪಿಯೂ ಒಬ್ಬರ ಮುಖ ಒಬ್ಬರು ನೋಡದೆ ಅಂತರ ಕಾಯ್ದುಕೊಂಡು ಮುನಿಸು ಪ್ರದರ್ಶಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಕಾಗಿನೆಲೆ ಕನಕ ಗುರುಪೀಠದ ಶ್ರೀ ನಿರಂಜನಾನಂದಪುರಿ ಶ್ರೀಗಳು, ಕುರುಬ ಸಮಾಜದ ಪ್ರತಿಯೊಂದು ಬೇಡಿಕೆಗೂ ಯಡಿಯೂರಪ್ಪ ಸ್ಪಂದಿಸಿದ್ದಾರೆ. ಪೀಠದ ಅಭಿವೃದ್ಧಿಗೆ ಸಾಕಷ್ಟು ಅನುದಾನ ನೀಡಿದ್ದಾರೆ ಎಂದು ಹೊಗಳಿದರು.

ಇದರಿಂದ ಕೊಂಚ ವಿಚಲಿತರಾದ ಸಚಿವ ಈಶ್ವರಪ್ಪ, ದಲಿತ, ಹಿಂದುಳಿದ 35 ಸಮಾಜಗಳ ಮಠಾಧಿಪತಿಗಳ ಒಕ್ಕೂಟ ಮಾಡಿಕೊಂಡು ನಿರಂಜನಾನಂದಪುರಿ ಶ್ರೀಗಳು ಅನುದಾನ ಕೋರಿದ್ದರು. ಆಗ ಮರು ಮಾತನಾಡದೆ 100 ಕೋಟಿ ರೂ. ಅನುದಾನ ನೀಡಿದ್ದು ಅಂದಿನ ಸಿಎಂ ಡಿ.ವಿ. ಸದಾನಂದ ಗೌಡರು ಎಂದು ತಮ್ಮ ಭಾಷಣದಲ್ಲಿ ತಿರುಗೇಟು ನೀಡಿದರು.

ನಂತರ ಮಾತನಾಡಿದ ಗೃಹ ಸಚಿವ ಬಸವರಾಜ ಬೊಮ್ಮಾಯಿ, ಕನಕದಾಸ ಜಯಂತಿ, ಕಾಗಿನೆಲೆ ಅಭಿವೃದ್ಧಿಗೆ ಸಿಎಂ ಯಡಿಯೂರಪ್ಪ ಅವರೇ ಕಾರಣ. ಕನಕದಾಸರಂತೆ ಯಡಿಯೂರಪ್ಪ ಅವರಿಗೂ ಜಾತಿ–ಮತ ಭೇದವಿಲ್ಲ. ಕನಕದಾಸರಿಗೆ ತಮ್ಮ ದಾಯಾದಿಗಳಿಂದಲೇ ಸಮಸ್ಯೆ–ಸೋಲಾಯಿತು. ಕನಕದಾಸರು ಆ ಸೋಲಿನಲ್ಲೂ ಗೆಲುವು ಕಂಡರು. ಅದೇ ರೀತಿ ನಮ್ಮನ್ನು ನಾವು ಗೆಲ್ಲುವುದು ಮುಖ್ಯ. ಕನಕದಾಸರಂತೆ ಬಿಎಸ್‌ವೈ ಅವರಿಗೂ ಅನೇಕ ಸವಾಲು ಎದುರಾಗಿದ್ದರೂ ಗೆಲ್ಲುವ ಶಕ್ತಿ ಅವರಿಗಿದೆ ಎಂದರು.



**ಹರಿಹರ: ಕಾಗಿನೆಲೆ ಶಾಖಾ ಮಠದ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಸಿಎಂ ಯಡಿಯೂರಪ್ಪ, ಸಚಿವ ಈಶ್ವರಪ್ಪ ಅಂತರ ಕಾಯ್ದುಕೊಂಡರು.**

ಮಾಧ್ಯಮದವರು ಸಿಎಂ ಯಡಿಯೂರಪ್ಪ ಅವರನ್ನು ಮಾತನಾಡಿಸಲು ಮುಂದಾಗುತ್ತಿದ್ದಂತೆ ಸಚಿವ ಈಶ್ವರಪ್ಪ ಅಲ್ಲಿಂದ ನಿರ್ಗಮಿಸಿದರು. ಸಚಿವ ಈಶ್ವರಪ್ಪ ರಾಜ್ಯಪಾಲರಿಗೆ ಬರೆದಿರುವ ಪತ್ರದ ಕುರಿತು ಮಾತನಾಡಲು ಸಿಎಂ ನಿರಾಕರಿಸಿದರು.